ಕರ್ನಾಟಕ ಸರ್ಕಾರ

ಸಂಖ್ಯೆ:ಗ್ರಾಅಪ:10/7:ಆರ್‌ಆರ್‌ಸಿ:2015.

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:5-3-2015.

**ಸುತ್ತೋಲೆ**

ವಿಷಯ : ಜಿಲ್ಲಾ ಪಂಚಾಯತ್ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಒತ್ತಡವಿರುವ ಹಿನ್ನೆಲೆಯಲ್ಲಿ ಇದಕ್ಕೆ ಬದಲಾಗಿ ಸದರಿ ರಸ್ತೆಗಳನ್ನು ಪಿಎಂಜಿಎಸ್‌ವೈ ನಡಿ ಅಭಿವೃದ್ಧಿಪಡಿಸಿ 5 ವರ್ಷಗಳ ನಿರ್ವಹಣೆ ಮುಗಿದ ನಂತರ ಜಿಲ್ಲಾ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವ ಬಗ್ಗೆ.

ಉಲ್ಲೇಖ:
1. 2009-10ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 6ನೇ ವರದಿಯಲ್ಲಿನ ಶಿಫಾರಸ್ಸು.
2. ಲೋಕೋಪಯೋಗಿ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಲೋಇ/136/ಐಎಫ್‌ಎ/2013, ದಿ:24-1-2015.

ಲೋಕೋಪಯೋಗಿ ಇಲಾಖೆಗೆ ಸಂಬಂಧಿಸಿದಂತೆ, 2009-10ನೇ ಸಾಲಿನ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 6ನೇ ವರದಿಯಲ್ಲಿ ಗ್ರಾಮೀಣ ರಸ್ತೆಗಳನ್ನು ಮೇಲ್ದರ್ಜೆಗೇರಿಸುವ ಕುರಿತು ಕೆಳಕಂಡಂತೆ ಶಿಫಾರಸ್ಸು ಮಾಡಿರುವುದಾಗಿ ಉಲ್ಲೇಖ-2ರ ಲೋಕೋಪಯೋಗಿ ಇಲಾಖೆಯ ಪತ್ರದಲ್ಲಿ ವರದಿಯಾಗಿರುತ್ತದೆ.

> **ಜಿಲ್ಲಾ ಪಂಚಾಯತ್ ರಸ್ತೆಗಳನ್ನು ಮೇಲ್ದರ್ಜೀಕರಿಸಲು ಒತ್ತಡವಿರುವುದಾಗಿ ಇಲಾಖೆ ತಿಳಿಸಿದೆ. ಇದರ ಬದಲಾಗಿ ಈ ರಸ್ತೆಗಳನ್ನು PMGSY ಅಡಿಯಲ್ಲಿ ಅಭಿವೃದ್ಧಿಪಡಿಸಿ 5 ವರ್ಷಗಳ ನಿರ್ವಹಣೆ ಮುಗಿದ ನಂತರ ಜಿಲ್ಲಾ ರಸ್ತೆಗಳನ್ನಾಗಿ ಮೇಲ್ದರ್ಜೆಗೇರಿಸುವುದನ್ನು ಪರಿಗಣಿಸಬೇಕೆಂದು ಸಮಿತಿಯು ಶಿಫಾರಸ್ಸು ಮಾಡುತ್ತದೆ.**

ಆದುದರಿಂದ ಜಿಲ್ಲಾ ಪಂಚಾಯತ್ ರಸ್ತೆಗಳನ್ನು ಮೇಲ್ದರ್ಜೆಗೇರಿಸಲು ಪ್ರಸ್ತಾವಿಸುವುದಕ್ಕೆ ಮುಂಚಿತವಾಗಿ, ಅಂತಹ ಗ್ರಾಮೀಣ ರಸ್ತೆಗಳನ್ನು ಸಾಧ್ಯವಾದಷ್ಟು ಮಟ್ಟಿಗೆ ಪಿಎಂಜಿಎಸ್‌ವೈ ಅಡಿಯಲ್ಲಿ ಅಭಿವೃದ್ಧಿಪಡಿಸಿದ್ದು, 5 ವರ್ಷಗಳ ನಿರ್ವಹಣೆ ಅವಧಿ ಮುಗಿದಿರುವುದನ್ನು ಖಚಿತಪಡಿಸಿಕೊಂಡು ಆನಂತರ ಮೇಲ್ದರ್ಜೆಗೇರಿಸಲು ಕ್ರಮ ವಹಿಸಿ, ತೆಗೆದುಕೊಂಡ ಕ್ರಮದ ಬಗ್ಗೆ ಅನುಸರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತಿಗಳಿಗೆ ಹಾಗೂ ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ ರವರಿಗೆ ಈ ಮೂಲಕ ನಿರ್ದೇಶಿಸಲಾಗಿದೆ.

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ :**

1. ಎಲ್ಲಾ ಜಿಲ್ಲಾ ಪಂಚಾಯತಿಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
2. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಕರ್ನಾಟಕ ಗ್ರಾಮೀಣ ರಸ್ತೆ ಅಭಿವೃದ್ಧಿ ಸಂಸ್ಥೆ,

3. ಮುಖ್ಯ ಇಂಜನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 3ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು-9.
4. ಸರ್ಕಾರದ ಕಾರ್ಯದರ್ಶಿಗಳು, ಸಾರ್ವಜನಿಕ ಲೆಕ್ಕಪತ್ರ ಸಮಿತಿ, ಕರ್ನಾಟಕ ವಿಧಾನ ಸಭೆಯ ಸಚಿವಾಲಯ, ಬೆಂಗಳೂರು.
5. ಸರ್ಕಾರದ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ.
6. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
7. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ ಕಚೇರಿಯ ಅಧೀಕ್ಷಕ ಇಂಜಿನಿಯರುಗಳು.
8. ಎಲ್ಲಾ ಪಂಚಾಯತ್ ರಾಜ್ ಇಂಜಿನಿಯರಿಂಗ್ / ಪಿಎಂಜಿಎಸ್‌ವೈ ವಿಭಾಗಗಳ ಕಾರ್ಯಪಾಲಕ ಇಂಜಿನಿಯರುಗಳು.